**All India Radio: Bangalore**
**National Bulletins In Kannada**
**02.07.2025 / 1.10pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**02.07.2025 / 1.10pm**

**<><*<><>*><>**

ಮುಖ್ಯಾಂಶಗಳು

ಮುಖ್ಯಾಂಶಗಳು

೧. ಕೊವಿಡ್-೧೯ ಲಸಿಕೆಗಳು ಹಾಗೂ ಹಠಾತ್ ಸಾವಿಗೆ ಯಾವುದೇ ಸಂಬಂಧವಿಲ್ಲ; ಕೇಂದ್ರ ಆರೋಗ್ಯ ಸಚಿವಾಲಯ ಸ್ಪಷ್ಟನೆ

೨. ಐದು ರಾಷ್ಟ್ರಗಳ ಪ್ರವಾಸ ಕೈಗೊಂಡಿರುವ ಪ್ರಧಾನಿ ನರೇಂದ್ರ ಮೋದಿ; ಇಂದು ಘಾನಾಗೆ ಭೇಟಿ

೩. ಕ್ವಾಡ್ ಸದಸ್ಯ ರಾಷ್ಟ್ರಗಳಿಂದ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಖಂಡನೆ; ಅಂತಾರಾಷ್ಟ್ರೀಯ ಕಾನೂನಿನಡಿ ತ್ವರಿತ ಕ್ರಮಕ್ಕೆ ಆಗ್ರಹ

೪. ಆಂಡರ್ಸನ್-ತೆಂಡೂಲ್ಕರ್ ಟ್ರೋಫಿ ಟೆಸ್ಟ್ ಸರಣಿ; ಎಡ್ಜ್‌ಬಾಸ್ಟನ್‌ನಲ್ಲಿಂದು ಭಾರತ-ಇಂಗ್ಲೆಂಡ್ ಮುಖಾಮುಖಿ

**><><><><><><><><><><><**

ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ- ಐಸಿಎಂಆರ್ ಮತ್ತು ರಾಷ್ಟ್ರೀಯ ರೋಗ ನಿಯಂತ್ರಣದ ಕೇಂದ್ರ- ಎನ್‌ಸಿಡಿಸಿ ನಡೆಸಿದ ಅಧ್ಯಯನಗಳು, ಕೋವಿಡ್-೧೯ ಲಸಿಕೆಗಳು ಹಾಗೂ ಹಠಾತ್ ಸಂಭವಿಸುವ ಮೃತ್ಯುಗಳ ನಡುವೆ ಯಾವುದೇ ಸಂಬಂಧವಿಲ್ಲ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಸ್ಪಷ್ಟಪಡಿಸಿದೆ. ದೇಶದ ಪ್ರಮುಖ ವೈದ್ಯಕೀಯ ಸಂಸ್ಥೆಗಳಾದ ಈ ಎರಡು ಸಂಸ್ಥೆಗಳ ಅಧ್ಯಯನಗಳಿಂದ ಭಾರತದಲ್ಲಿ ಲಭ್ಯವಿರುವ ಕೋವಿಡ್ ಲಸಿಕೆಗಳು ಸುರಕ್ಷಿತವಾಗಿಯೂ, ಪರಿಣಾಮಕಾರಿಯಾಗಿಯೂ ಇವೆ ಎಂಬುದು ಸ್ಪಷ್ಟವಾಗಿದೆ. ತೀವ್ರ ಪಾರ್ಶ್ವವಾಯುಗಳ ಸಂಭವ ಅತ್ಯಂತ ಅಪರೂಪವಾಗಿದೆ ಎಂದು ಈ ಅಧ್ಯಯನಗಳು ತೋರಿಸುತ್ತವೆ ಎಂದು ಸಚಿವಾಲಯ ತಿಳಿಸಿದೆ. ಹಠಾತ್ ಹೃದಯಾಘಾತದಿಂದ ಉಂಟಾಗುವ ಸಾವುಗಳು ಜೀವನಶೈಲಿ, ಆರೋಗ್ಯ ಸಮಸ್ಯೆ ಹಾಗೂ

ಕೋವಿಡ್ ನಂತರದ ವಿವಿಧ ಕಾರಣಗಳಿಂದ ಸಂಭವಿಸಬಹುದು ಎಂಬುದನ್ನು ತಜ್ಞರು ತಿಳಿಸಿದ್ದಾರೆ. ಐಸಿಎಂಆರ್ ಮತ್ತು ಎನ್‌ಸಿಡಿಸಿ ಸಂಸ್ಥೆಗಳು ವಿಭಿನ್ನ ಸಂಶೋಧನಾ ವಿಧಾನಗಳನ್ನು ಬಳಸಿಕೊಂಡು, ಎರಡು ಪೂರಕ ಅಧ್ಯಯನಗಳನ್ನು ನಡೆಸಿದವು. ಮೊದಲ ಅಧ್ಯಯನವು, ಅಕ್ಟೋಬರ್ ೨೦೨೧ರಿಂದ ಮಾರ್ಚ್ ೨೦೨೩ರ ಅವಧಿಯಲ್ಲಿ ಯಾವುದೇ ಆರೋಗ್ಯ ಸಮಸ್ಯೆ ಇಲ್ಲದಿದ್ದರೂ ಹಠಾತ್ ಸಾವಿಗೀಡಾದ, ವ್ಯಕ್ತಿಗಳ ಡೇಟಾವನ್ನು ವಿಶ್ಲೇಷಿಸಿತು. ಎರಡನೇ ಅಧ್ಯಯನ ನಡೆಸಿದ ಏಮ್ಸ್, ನವದೆಹಲಿಯಲ್ಲಿ ಯುವ ಜನತೆ ಹಠಾತ್ ಸಾವಿನ ಸಾಮಾನ್ಯ ಕಾರಣಗಳನ್ನು ಪತ್ತೆ ಹಚ್ಚಲು ದೀರ್ಘಕಾಲಿಕವಾಗಿ ನಡೆಯುತ್ತಿರುವ ಅಧ್ಯಯನವಾಗಿದೆ. ಈ ಎರಡು ಅಧ್ಯಯನಗಳ ಸಂಯೋಜಿತ ವರದಿ ಪ್ರಕಾರ, ಲಸಿಕೆಯಿಂದ ಹಠಾತ್ ಸಾವು ಸಂಭವಿಸುವ ಸಾಧ್ಯತೆ ಇಲ್ಲ. ವ್ಯಕ್ತಿಗಳ ಈ ಹಿಂದಿನ ಆರೋಗ್ಯ ಸಮಸ್ಯೆಗಳೇ ಮುಖ್ಯ ಕಾರಣವಾಗಿರಬಹುದು ಎಂದು ಸೂಚಿಸಿದೆ. ಕೇಂದ್ರ ಆರೋಗ್ಯ ಸಚಿವಾಲಯದ ಎಚ್ಚರಿಕೆ ಪ್ರಕಾರ, ಪ್ರಾಮಾಣಿಕ ಸಾಕ್ಷ್ಯವಿಲ್ಲದೆ ಲಸಿಕೆಗಳ ಬಗ್ಗೆ ಹರಡುವ ಊಹಾಪೋಹಗಳು ಸಾರ್ವಜನಿಕ ವಿಶ್ವಾಸವನ್ನು ಕುಗ್ಗಿಸಬಹುದು. ಇದು ಕೋವಿಡ್ ಸಂಕಟದ ಸಮಯದಲ್ಲಿ ಲಕ್ಷಾಂತರ ಜೀವಗಳನ್ನು ರಕ್ಷಿಸಿದ ಲಸಿಕೆಗಳ ಮೇಲೆ ಪರಿಣಾಮ ಬೀರಬಹುದು ಮತ್ತು ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ಅಪಾಯಕಾರಿಯಾಗಿದೆ ಎಂದು ತಿಳಿಸಿದೆ.

><><><><><><><><><><><><><

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಘಾನಾ, ಟ್ರಿನಿಡಾಡ್ ಮತ್ತು ಟೊಬಾಗೊ, ಅರ್ಜೆಂಟೀನಾ, ಬ್ರೆಜಿಲ್ ಮತ್ತು ನಮೀಬಿಯಾಗಳಿಗೆ ಭೇಟಿ ನೀಡಲು ತೆರಳಿದ್ದಾರೆ. ಎರಡು ದಿನಗಳ ಭೇಟಿಗಾಗಿ ಪ್ರಧಾನಿ, ಇಂದು ಘಾನಾಗೆ ತೆರಳಿದ್ದಾರೆ. ತಮ್ಮ ನಿರ್ಗಮನ ಹೇಳಿಕೆಯಲ್ಲಿ ಪ್ರಧಾನಿ, ಘಾನಾ ಜಾಗತಿಕ ದಕ್ಷಿಣದಲ್ಲಿ ಮೌಲ್ಯಯುತ ಪಾಲುದಾರರಾಗಿದ್ದು, ಆಫ್ರಿಕನ್ ಒಕ್ಕೂಟ ಮತ್ತು ಪಶ್ಚಿಮ ಆಫ್ರಿಕಾದ ರಾಜ್ಯಗಳ ಆರ್ಥಿಕ ಸಮುದಾಯದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅವರು ಒತ್ತಿ ಹೇಳಿದರು. ಐತಿಹಾಸಿಕ ಸಂಬಂಧಗಳನ್ನು ಮತ್ತಷ್ಟು ಬಲಗೊಳಿಸುವುದು, ಹೂಡಿಕೆ, ಇಂಧನ, ಆರೋಗ್ಯ, ಭದ್ರತೆ, ಸಾಮರ್ಥ್ಯ ವೃದ್ಧಿ ಮತ್ತು ಅಭಿವೃದ್ಧಿ ಪಾಲುದಾರಿಕೆ ಕ್ಷೇತ್ರಗಳಲ್ಲಿ ಸಹಕಾರದ ಹೊಸ ಮಾರ್ಗಗಳನ್ನು ಎದುರು ನೋಡುತ್ತಿರುವುದಾಗಿ ಅವರು ತಿಳಿಸಿದರು. ಭೇಟಿಯ ವೇಳೆ ಪ್ರಧಾನಿ ನರೇಂದ್ರ ಮೋದಿ ಘಾನಾ ಸಂಸತ್ತನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ, ಪ್ರಧಾನಿ ನಾಳೆ ಟ್ರಿನಿಡಾಡ್ ಮತ್ತು ಟೊಬಾಗೊಗೆ ಎರಡು ದಿನಗಳ ಭೇಟಿಗಾಗಿ ತೆರಳಲಿದ್ದಾರೆ. ಪ್ರಧಾನಿ ಮೋದಿ ಟ್ರಿನಿಡಾಡ್ ಅಧ್ಯಕ್ಷೆ

ಕ್ರಿಸ್ಟೀನ್ ಕಾರ್ಲಾ ಕಂಗಲೂ ಮತ್ತು ಪ್ರಧಾನಿ ಕಮಲಾ ಪರ್ಸಾದ್-ಬಿಸ್ಸೆಸ್ಸರ್ ಅವರನ್ನು ಭೇಟಿ ಮಾತುಕತೆ ನಡೆಸಲಿದ್ದಾರೆ. ಈ ಭೇಟಿಯು ಭಾರತ ಮತ್ತು ಟ್ರಿನಿಡಾಡ್ ಹಾಗೂ ಟೊಬಾಗೊವನ್ನು ಒಂದುಗೂಡಿಸುವ ವಿಶೇಷ ಬಂಧಗಳನ್ನು ಪುನರುಜ್ಜೀವನಗೊಳಿಸಲು ಅವಕಾಶವನ್ನು ಒದಗಿಸುತ್ತದೆ. ನಂತರ ಪ್ರಧಾನಿಯವರು ಅರ್ಜೆಂಟೀನಾಗೆ ಪ್ರಯಾಣಿಸಲಿದ್ದಾರೆ. ಕಳೆದ ೫೭ ವರ್ಷಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ಅರ್ಜೆಂಟೀನಾಕ್ಕೆ ನೀಡುವ ಮೊದಲ ದ್ವಿಪಕ್ಷೀಯ ಭೇಟಿ ಇದಾಗಿದೆ. ಅವರು ಅರ್ಜೆಂಟೀನಾ ಅಧ್ಯಕ್ಷ ಜೇವಿಯರ್ ಮೈಲ್ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ, ಇದು ಕೃಷಿ, ನಿರ್ಣಾಯಕ ಖನಿಜಗಳು, ಇಂಧನ, ವ್ಯಾಪಾರ, ಪ್ರವಾಸೋದ್ಯಮ, ತಂತ್ರಜ್ಞಾನ ಮತ್ತು ಹೂಡಿಕೆ ಕ್ಷೇತ್ರಗಳನ್ನು ಒಳಗೊಂಡಂತೆ ಪರಸ್ಪರ ಪ್ರಯೋಜನಕಾರಿ ಸಹಕಾರವನ್ನು ಮುನ್ನಡೆಸುವತ್ತ ಗಮನಹರಿಸುತ್ತದೆ. ಪ್ರಧಾನಿಯವರು ಇದೇ ೫ ರಿಂದ ೮ ರವರೆಗೆ ಬ್ರೆಜಿಲ್‌ಗೆ ಪ್ರಯಾಣಿಸಲಿದ್ದು, ನಂತರ ೨೦೨೫ ರ ೧೭ ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದು ಪ್ರಧಾನಿಯವರ ಬ್ರೆಜಿಲ್‌ಗೆ ನಾಲ್ಕನೇ ಭೇಟಿಯಾಗಲಿದೆ. ಶೃಂಗಸಭೆಯ ಸಮಯದಲ್ಲಿ, ಪ್ರಧಾನ ಮಂತ್ರಿಯವರು ಜಾಗತಿಕ ಆಡಳಿತದ ಸುಧಾರಣೆ, ಶಾಂತಿ ಮತ್ತು ಭದ್ರತೆ, ಬಹುಪಕ್ಷೀಯತೆಯನ್ನು ಬಲಪಡಿಸುವುದು, ಕೃತಕ ಬುದ್ಧಿಮತ್ತೆಯ ಜವಾಬ್ದಾರಿಯುತ ಬಳಕೆ, ಹವಾಮಾನ ಕ್ರಮ, ಜಾಗತಿಕ ಆರೋಗ್ಯ, ಆರ್ಥಿಕ ಮತ್ತು ಆರ್ಥಿಕ ವಿಷಯಗಳು ಸೇರಿದಂತೆ ಪ್ರಮುಖ ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಬ್ರೆಸಿಲಿಯಾಕ್ಕೆ ಭೇಟಿ ನೀಡಲಿದ್ದಾರೆ. ಇದು ಸುಮಾರು ಆರು ದಶಕಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ಮಾಡುವ ಮೊದಲ ಭೇಟಿಯಾಗಿದೆ. ಈ ಭೇಟಿಯು ರಾಷ್ಟ್ರದೊಂದಿಗೆ ನಿಕಟ ಪಾಲುದಾರಿಕೆಯನ್ನು ಬಲಪಡಿಸಲು ಮತ್ತು ಜಾಗತಿಕ ದಕ್ಷಿಣದ ಆದ್ಯತೆಗಳನ್ನು ಮುಂದುವರಿಸುವಲ್ಲಿ ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಅವರೊಂದಿಗೆ ದ್ವಿಪಕ್ಷೀಯ ಸಂಬಂಧ ವೃದ್ಧಿಸಲು ಎದುರು ನೋಡುತಿದ್ದಾರೆ. ಕೊನೆಯಾಗಿ, ಪ್ರಧಾನಿ ನರೇಂದ್ರ ಮೋದಿ ನಮೀಬಿಯಾಕ್ಕೆ ಭೇಟಿ ನೀಡಲಿದ್ದಾರೆ. ನಮೀಬಿಯಾ ಅಧ್ಯಕ್ಷ ಡಾ.ನೆಟುಂಬೊ ನಂದಿ-ನದೈತ್ವಾ ಅವರನ್ನು ಭೇಟಿ ಮಾಡಿ ಜನರು, ಪ್ರದೇಶಗಳು ಮತ್ತು ವಿಶಾಲ ಜಾಗತಿಕ ದಕ್ಷಿಣದ ಪ್ರಯೋಜನದ ಸಹಕಾರಕ್ಕಾಗಿ ಹೊಸ ಮಾರ್ಗಸೂಚಿಯನ್ನು ರೂಪಿಸಲಿದ್ದಾರೆ. ನಮೀಬಿಯಾ ಸಂಸತ್ತಿನ ಜಂಟಿ ಅಧಿವೇಶನವನ್ನು ಸಹ ಉದ್ದೇಶಿಸಿ ಪ್ರಧಾನಿ ನರೇಂದ್ರ ಮಾತನಾಡಲಿದ್ದಾರೆ.

><><><><><><><><><><><><><

ಪಹಲ್ಗಾಮ್ ಭಯೋತ್ಪಾದಕ ದಾಳಿಯ ರೂವಾರಿಗಳು, ಹಣಕಾಸು ನೆರವು ನೀಡಿದವರು ಸೇರಿದಂತೆ ಪಾಲುದಾರರೆಲ್ಲರನ್ನೂ ಶಿಕ್ಷೆಗೊಳಪಡಿಸಲು ಕ್ವಾಡ್ ಸದಸ್ಯ ರಾಷ್ಟ್ರಗಳು ಕರೆ ನೀಡಿದ್ದು, ಇದಕ್ಕಾಗಿ ವಿಶ್ವ ಸಂಸ್ಥೆಯ ಸದಸ್ಯ ರಾಷ್ಟ್ರಗಳ ಸಹಕಾರ ಕೋರಿವೆ. ವಾಷಿಂಗ್ಟನ್ ಡಿಸಿಯಲ್ಲಿ ನಡೆದ ಕ್ವಾಡ್ ವಿದೇಶಾಂಗ ಸಚಿವರ ಸಭೆಯಲ್ಲಿ ನೀಡಿದ ಜಂಟಿ ಹೇಳಿಕೆಯಲ್ಲಿ, ಜಮ್ಮು - ಕಾಶ್ಮೀರದ ಪಹಲ್ಗಾಂನಲ್ಲಿ ಏಪ್ರಿಲ್ ೨೨ ರಂದು, ೨೫ ಭಾರತೀಯರು ಮತ್ತು ಒಬ್ಬ ನೇಪಾಳಿ ನಾಗರಿಕನ ಸಾವಿಗೆ ಕಾರಣವಾದ ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ ಖಂಡಿಸಲಾಗಿದೆ. ಸಭೆಯಲ್ಲಿ ಗಡಿಯಾಚೆಗಿನ ಸೇರಿದಂತೆ ಎಲ್ಲಾ ಸ್ವರೂಪದ ಭಯೋತ್ಪಾದನೆಯನ್ನು ಅಂತಾರಾಷ್ಟ್ರೀಯ ಕಾನೂನು ಮತ್ತು ವಿಶ್ವಸಂಸ್ಥೆ ನಿರ್ಣಯಗಳ ಪ್ರಕಾರ ಕ್ರಮ ಕೈಗೊಳ್ಳುವಂತೆ ಆಗ್ರಹಿಸಲಾಗಿದೆ. ಸಭೆಯಲ್ಲಿ "ಕ್ವಾಡ್ ನಿರ್ಣಾಯಕ ಖನಿಜಗಳ ಉಪಕ್ರಮ" ಎಂಬ ಹೊಸ ಯೋಜನೆ ಘೋಷಿಸಲಾಗಿದ್ದು, ಇಂಡೋ-ಪೆಸಿಫಿಕ್ ಪ್ರದೇಶದ ಆರ್ಥಿಕ ಭದ್ರತೆ ಹಾಗೂ ಖನಿಜ ಪೂರೈಕೆ ಸರಪಳಿಗೆ ಬಲ ನೀಡಲಿದೆ. ಪ್ರಮುಖವಾಗಿ ಮುಂಬೈನಲ್ಲಿ "ಕ್ವಾಡ್ ಭವಿಷ್ಯದ ಬಂದರುಗಳು" ಸಹಯೋಗ ಯೋಜನೆ ಆರಂಭಿಸಲು ನಿರ್ಧರಿಸಲಾಗಿದೆ. ಈ ವರ್ಷ "ಕ್ವಾಡ್ ಇಂಡೋ-ಪೆಸಿಫಿಕ್ ಸರಕು ಜಾಲ" ಎಂಬ ಕ್ಷೇತ್ರ ತರಬೇತಿ ಕಾರ್ಯಕ್ರಮ ಆಯೋಜಿಸಲು ಸದಸ್ಯ ರಾಷ್ಟ್ರಗಳು ಯೋಜಿಸಿವೆ. ಸಭೆಯಲ್ಲಿ ಸೈಬರ್ ಅಪರಾಧ ಮತ್ತು ಆನ್‌ಲೈನ್ ವಂಚನೆಯ ವಿರುದ್ಧ ಕಠಿಣ ಹೋರಾಟಕ್ಕೂ ಸದಸ್ಯ ರಾಷ್ಟ್ರಗಳು ಬದ್ಧರಾಗಿವೆ.

><><><><><><><><><><><><><

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ನಿನ್ನೆ ರಾತ್ರಿ ಅಮೆರಿಕದ ಪೆಂಟಗನ್‌ನಲ್ಲಿ ಅಮೆರಿಕದ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಅವರನ್ನು ಭೇಟಿಯಾದರು. ಉಭಯ ದೇಶಗಳ ರಕ್ಷಣಾ ಸಂಬಂಧಗಳ ಕಾರ್ಯತಂತ್ರದ ಮಹತ್ವವನ್ನು ಒತ್ತಿ ಹೇಳಿರುವ ಸಚಿವರು, ಅವುಗಳನ್ನು ದ್ವಿಪಕ್ಷೀಯ ಸಂಬಂಧದ "ಅತ್ಯಂತ ಪರಿಣಾಮಕಾರಿ ಸ್ತಂಭಗಳಲ್ಲಿ ಒಂದು ಎಂದು ಬಣ್ಣಿಸಿದ್ದಾರೆ. ವಾಷಿಂಗ್ಟನ್‌ನಲ್ಲಿ ನಡೆದ ಕ್ವಾಡ್ ವಿದೇಶಾಂಗ ಮಂತ್ರಿಗಳ ಸಭೆಯ ನಂತರ ಈ ಸಭೆ ನಡೆದಿದ್ದು, ಉನ್ನತ ಮಟ್ಟದ ಭಾರತ-ಅಮೆರಿಕ ಸಂವಹನಗಳ ಸರಣಿಯಲ್ಲಿ ಮತ್ತೊಂದು ಪ್ರಮುಖ ಹೆಜ್ಜೆಯಾಗಿದೆ.

><><><><><><><><><><><><

ಸ್ವಯಂಚಾಲಿತ ಹವಾಮಾನ ಕೇಂದ್ರಗಳು ಮತ್ತು ಡಾಪ್ಲರ್ ರಾಡಾರ್‌ಗಳು, ದೇಶದ ನೈಜ-ಸಮಯದ ಹವಾಮಾನ ಮುನ್ಸೂಚನೆಗಳನ್ನು ಗಣನೀಯವಾಗಿ ಹೆಚ್ಚಿಸುತ್ತಿವೆ ಎಂದು ಕೇಂದ್ರ ಭೂ ವಿಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಪ್ರಧಾನಿ ನರೇಂದ್ರ ಮೋದಿಯವರ 'ಮಿಷನ್ ಮೌಸಮ್' ಅಡಿಯಲ್ಲಿ, ಭಾರತದ ಹವಾಮಾನ ಮುನ್ಸೂಚನೆ ವ್ಯವಸ್ಥೆಯನ್ನು ಜಾಗತಿಕವಾಗಿ ಅತ್ಯುತ್ತಮ ಮಾನದಂಡಗಳಿಗೆ ತಕ್ಕಂತೆ ಗಣನೀಯವಾಗಿ ವರ್ಧಿಸಲಾಗುತ್ತಿದೆ ಎಂದು ಹೇಳಿದರು. ನೈಜ-ಸಮಯದ ಹವಾಮಾನ ಮುನ್ಸೂಚನೆಯನ್ನು ಹೆಚ್ಚಿಸಲು ಸ್ವಯಂಚಾಲಿತ ಹವಾಮಾನ ಕೇಂದ್ರಗಳು-ಎಡಬ್ಲ್ಯೂಎಸ್ ಮತ್ತು ಡಾಪ್ಲರ್ ರಾಡಾರ್‌ಗಳನ್ನು ಸೇರಿಸಲಾಗುತ್ತಿದೆ ಎಂದು ತಿಳಿಸಿದರು. ನಮ್ಮ ಹವಾಮಾನ ಮುನ್ಸೂಚನೆಗಳನ್ನು ನೆರೆಯ ದೇಶಗಳು ಸಹ ಪಡೆಯುತ್ತಿವೆ, ಇದು ನಮ್ಮ ವಿಶ್ವಾಸಾರ್ಹತೆಯನ್ನು ದೃಢಪಡಿಸುತ್ತದೆ" ಎಂದು ಅವರು ಹೇಳಿದರು.

><><><><><><><><><><><><

ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ಮಾರಿಷಸ್‌ಗೆ ನೀಡಿದ ಅಧಿಕೃತ ಭೇಟಿಯ ಸಂದರ್ಭದಲ್ಲಿ, ಮಾರಿಷಸ್‌ನ ಪ್ರಮುಖ ನಾಯಕರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಕಾರ್ಯದರ್ಶಿ ಮಿಸ್ರಿ, ಮಾರಿಷಸ್‌ನ ಅಧ್ಯಕ್ಷ ಧರ್ಮಬೀರ್ ಗೋಕೂಲ್, ಪ್ರಧಾನಮಂತ್ರಿ ಡಾ. ನವಿನ್‌ಚಂದ್ರ ರಾಮಗೂಲಂ, ಉಪಪ್ರಧಾನಿ ಪೌಲ್ ಬೆರೆಂಜರ್ ಹಾಗೂ ವಿದೇಶಾಂಗ ಸಚಿವ ಧನಂಜಯ್ ರಾಮ್ಫುಲ್ ಅವರನ್ನು ಭೇಟಿಯಾದರು. ಪ್ರಧಾನಮಂತ್ರಿ ರಾಮಗೂಲಂ ಅವರೊಂದಿಗೆ ನಡೆದ ಸಭೆಯಲ್ಲಿ, ಭಾರತ ಮತ್ತು ಮಾರಿಷಸ್ ನಡುವೆ ವಿವಿಧ ಕ್ಷೇತ್ರಗಳಲ್ಲಿರುವ ದ್ವಿಪಕ್ಷೀಯ ಸಹಕಾರದ ಕುರಿತು ವಿಚಾರ ವಿನಿಮಯ ನಡೆಯಿತು. ವಿಕ್ರಂ ಮಿಸ್ರಿ ಅವರು ಭಾರತ ಮತ್ತು ಮಾರಿಷಸ್ ನಡುವಿನ ವಿಶೇಷ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಮಾರ್ಗಗಳನ್ನು ಅನ್ವೇಷಿಸಿದರು ಮತ್ತು ಮಾರಿಷಸ್‌ನ ಅಭಿವೃದ್ಧಿ, ಪ್ರಗತಿ ಮತ್ತು ಸಮೃದ್ಧಿಗೆ ಭಾರತ ನೀಡಿರುವ ಬದ್ಧತೆಯನ್ನು ಪುನರುಚ್ಚರಿಸಿದರು.

><><><><><><><><><><><><

ವಿಂಬಲ್ಡನ್ ಟೆನಿಸ್‌ನ ಪುರುಷರ ಡಬಲ್ಸ್‌ನ ಮೊದಲ ಸುತ್ತಿನ ಸ್ಪರ್ಧೆಗಳಲ್ಲಿ ಭಾರತವಿಂದು ತನ್ನ ಅಭಿಯಾನವನ್ನು ಆರಂಭಿಸಲಿದೆ. ಭಾರತದ ಆಟಗಾರರಾದ ರೋಹನ್ ಬೋಪಣ್ಣ, ಯೂಕಿ ಭಾಂಬ್ರಿ, ಶ್ರೀರಾಮ್ ಬಾಲಾಜಿ ಮತ್ತು ರಿತ್ವಿಕ್ ಚೌಧರಿ ಬೊಲ್ಲಿಪಲ್ಲಿ ಅವರು ಕಣಕ್ಕಿಳಿಯಲಿದ್ದಾರೆ. ಭಾರತೀಯ ಕಾಲಮಾನ ಇಂದು ಮಧ್ಯಾಹ್ನ ೩.೩೦ಕ್ಕೆ ನಡೆಯಲಿರುವ ಪುರುಷರ ಡಬಲ್ಸ್ ಪಂದ್ಯದಲ್ಲಿ ಭಾರತದ ಯೂಕಿ ಭಾಂಬ್ರಿ ಹಾಗೂ ಅಮೆರಿಕದ ರಾಬರ್ಟ್ ಗೆಲೊವೆ ಜೋಡಿ, ಮೊನೆಕೊದ ರೊಮೇನ್ ಆರ್ನಿಯೋಡೊ ಮತ್ತು ಫ್ರಾನ್ಸ್‌ನ ಮ್ಯಾನ್ವೆಲ್ ಗಿನಾರ್ಡ್ ಜೋಡಿಯನ್ನು ಎದುರಿಸಲಿದೆ. ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಅಮೆರಿಕದ ಕೊಕೊಗೌಫ್ ಮೊದಲ ಸುತ್ತಿನಲ್ಲೇ ಟೂರ್ನಿಯಿಂದ ಹೊರಬಿದ್ದಿದ್ದಾರೆ. ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಅವರು ಉಕ್ರೇನ್ ದಯಾನ ಯಸ್ತ್ರೆಮ್ಸ್ಕಾ ವಿರುದ್ಧ ೬-೭, ೧-೬ ಸೆಟ್‌ಗಳ ಅಂತರದಲ್ಲಿ ಸೋಲನುಭವಿಸಿದರು. ನಿನ್ನೆ ನಡೆದ ಪುರುಷರ ಸಿಂಗಲ್ಸ್‌ನಲ್ಲಿ, ವಿಶ್ವದ ನಂ. ೧ ಆಟಗಾರ ಜಾನಿಕ್ ಸಿನ್ನರ್ ಮೊದಲ ಸುತ್ತಿನಲ್ಲಿ ಇಟಲಿಯ ಲುಕಾ ನಾರ್ಡಿ ಅವರನ್ನು ನೇರ ಸೆಟ್‌ಗಳಲ್ಲಿ ಸೋಲಿಸಿದರು.

><><><><><><><><><><><><